ಡಾ॥ ಜಿ ಪರಮೇಶ್ವರ್ (ಉನ್ನತ ಶಿಕ್ಷಣ ಸಚಿವರು)

ಅ) ಬಂದಿದೆ

ಆ) 2003–04ನೇ ಸಾಲಿನ ಆಯವ್ಯಯವು ಪೂರ್ಣಗೊಂಡಿದ್ದು, 2004–05ನೇ ಸಾಲಿನಲ್ಲಿ ಅನುದಾನದ ಲಭ್ಯತೆಯನ್ನು ಈ ಕಟ್ಟಡವನ್ನು ಪೂರ್ಣಗೊಳಿಸಲು ಕ್ರಮ ಕೈಗೊಳ್ಳಲಾಗುವುದು

ಬೆಳಗಾವಿಯಲ್ಲಿ ನಡೆದ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದಲ್ಲಿ ಕೈಗೊಂಡ ನಿರ್ಣಯಗಳನ್ನು ಅನುಷ್ಠಾನಗೊಳಿಸುವುದು

147 (37) ಶ್ರೀ ಕೌಜಲಗಿ ಮಾಹಾಂತೇಶ್ ಶಿವಾನಂದ (ಬೈಲಹೊಂಗಲ) ಮಾನ್ಯ ಕನ್ನಡ ಮತ್ತು ಸಂಸ್ಕೃತಿ ಇಲಾಖಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬೆಳಗಾವಿಯಲ್ಲಿ ಕಳೆದ ವರ್ಷ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದಲ್ಲಿ ಕೈಗೊಂಡ ನಿರ್ಣಯಗಳನ್ನು ಅನುಷ್ಠಾನಗೊಳಿಸಲಾಗುವುದೇ,

ಆ) ಹಾಗಿದ್ದಲ್ಲಿ, ಈ ನಿರ್ಣಯಗಳನ್ನು ಅನುಷ್ಠಾನಗೊಳಿಸಲು ಯಾವ ಕ್ರಮಕೈಗೊಳ್ಳಲಾಗಿದೆ

ಇ) ಈ ಸಮ್ಮೇಳನದ ಯಾವ ಯಾವ ನಿರ್ಣಯಗಳನ್ನು ಅನುಷ್ಠಾನಗೊಳಿಸಬೇಕೆಂದು ನಿರ್ಣಯಿಸಲಾಗಿದೆ?

ಶ್ರೀಮತಿ ರಾಣಿ ಸತೀಶ್ (ಕನ್ನಡ ಮತ್ತು ಸಂಸ್ಕೃತಿ ಇಲಾಖಾ ರಾಜ್ಯ ಸಚಿವರು)

ಅ) ಪರಿಶೀಲಿಸಲಾಗುತ್ತಿದೆ

ಆ) ಉದ್ಭವಿಸುವುದಿಲ್ಲ

ಇ) ಅನುಬಂಧ–1 ರಲ್ಲಿ ಕೊಡಲಾಗಿದೆ

ವಿಧಾನಸಭಾ ಸದಸ್ಯರಾದ ಶ್ರೀ ಕೌಜಲಗಿ ರವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 37ಕ್ಕೆ ಅನುಬಂಧ

ಕ್ರ ಸಂ	ನಿರ್ಣಯಗಳು	ಕೈಗೊಂಡ ಕ್ರಮಗಳು
1	ಪ್ರಾದೇಶಿಕ ಅಸಮಾನತೆಯ ನಿವಾರಣೆಗಾಗಿ ನೇಮಕಗೊಂಡ ಡಾ ಡಿ ಎಂ ನಂಜುಂಡಪ್ಪ ಸಮಿತಿಯ ವರದಿಯನ್ನು 2003–04ನೇ ವರ್ಷದ ಆಯವ್ಯಯದಲ್ಲಿ ಅಳವಡಿಸಿಕೊಂಡು ಕಾರ್ಯರೂಪಕ್ಕೆ ತರಬೇಕೆಂದು ಮಹಾ ಸಮ್ಮೇಳನವು ಸರ್ಕಾರವನ್ನು ಒತ್ತಾಯಿಸುತ್ತದೆ	ಯೋಜನಾ ಇಲಾಖೆಗೆ ಕ್ರಮ ಕೈಗೊಳ್ಳ ಲಾಗಿದೆ
2	ಕರ್ನಾಟಕ ಸಮಗ್ರ ಅಭಿವೃದ್ಧಿಯ ದೃಷ್ಟಿ ಯಿಂದ ಕರ್ನಾಟಕ ರಾಜ್ಯದ ವಿಧಾನಮಂಡಲದ ಅಧಿವೇಶನಗಳು ಪ್ರತಿವರ್ಷ ಉತ್ತರ ಕರ್ನಾಟಕ ಭಾಗದ ಬೆಳಗಾವಿಯಲ್ಲಿ ಜರುಗಬೇಕು	ವಿಧಾನಮಂಡಲಕ್ಕೆ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ
3	ಕೇಂದ್ರ ಸರ್ಕಾರವು ಮಹಾಜನ್ ಆಯೋಗದ ನೇಮಕದಲ್ಲಿ ಸಹಭಾಗಿಯಾಗಿದ್ದುದರಿಂದ ಅದು ತನ್ನ ಮೇಲಿನ ನೈತಿಕ ಹೊಣೆಯನ್ನು ಅನುಲಕ್ಷಿಸಿ ಮಹಾಜನ್ ವರದಿಯನ್ನು	ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಗೆ ಕ್ರಮ ಕೈಗೊಳ್ಳಲು ಕೋರಿದ

1	2	3
	ಯಥಾವತ್ತಾಗಿ ಕೂಡಲೇ ಜಾರಿಗೆ ತರತಕ್ಕದ್ದೆಂದು ಈ ಸಮ್ಮೇಳನವು ಭಾರತ ಸರ್ಕಾರವನ್ನು ಒತ್ತಾಯಿಸುತ್ತದೆ	
4	ವಿಶ್ವಕನ್ನಡ ಸಮ್ಮೇಳನವನ್ನು 2004ನೇ ಇಸವಿಯಲ್ಲಿ ಏರ್ಪಡಿಸಬೇಕೆಂದು ಈ ಸಮ್ಮೇಳನವು ಕರ್ನಾಟಕ ಸರ್ಕಾರವನ್ನು ಆಗ್ರಹಪಡಿಸುತ್ತದೆ	2006ನೇ ಸಾಲಿನಲ್ಲಿ ಸುವರ್ಣ ಕರ್ನಾಟಕ ಆಚರಣೆ ಸಂದರ್ಭದಲ್ಲಿ ವಿಶ್ವ ಕನ್ನಡ ಸಮ್ಮೇಳನ ನಡೆಸಬಹುದೆಂದು ಅಭಿಪ್ರಾಯಪಡಲಾಗಿದೆ
5	ಜಾಗತೀಕರಣ ಮತ್ತು ಅಭಿವೃದ್ಧಿಯ ಹೆಸರಿನಲ್ಲಿ ನೆಲೆಯನ್ನು ಕಳೆದುಕೊಳ್ಳುತ್ತಿರುವ ಕರ್ನಾಟಕದ ರೈತರು ಮತ್ತು ಕಾರ್ಮಿಕರ ಹಿತವನ್ನು ರಕ್ಷಿಸುವ ಸಂಪೂರ್ಣ ಜವಾಬ್ದಾರಿಯನ್ನು ಕರ್ನಾಟಕ ರಾಜ್ಯ ಸರ್ಕಾರ ಹೊರಬೇಕೆಂದು ಈ ಸಮ್ಮೇಳನವು ಕೋರುತ್ತದೆ	ಕೃಷಿ ಮತ್ತು ತೋಟಗಾರಿಕೆ ಇಲಾಖೆಗೆ ಕ್ರಮ ಕೈಗೊಳ್ಳಲು ಕೋರಲಾಗಿದೆ
6	ಸರ್ಕಾರದಲ್ಲಿರುವವರ ಲಹರಿಯಂತೆ ಶೈಕ್ಷಣಿಕ ಹಾಗೂ ಭಾಷಾಧೋರಣೆ ಕಾಲಕಾಲಕ್ಕೆ ಬದಲಾಗದೆ ಪರಿಣತರ ಸಲಹೆಯಂತೆ ಕೈಗೊಂಡ ತೀರ್ಮಾನಗಳನ್ನು ಅನುಸರಿಸಿ ಸರ್ಕಾರ ಕನ್ನಡದ ಹಿತರಕ್ಷಣೆ ಆಗುವಂತೆ ಪದವಿಪೂರ್ವ ಕಾಲೇಜುಗಳಲ್ಲಿ ಪ್ರಥಮದರ್ಜೆ ಕಾಲೇಜುಗಳಲ್ಲಿ ಹಾಗೂ ತಾಂತ್ರಿಕ ಮತ್ತು ವೈದ್ಯಕೀಯ ಶಿಕ್ಷಣ ಕ್ಷೇತ್ರದಲ್ಲಿ ಮತ್ತು ಬಿ ಎಡ್ ಭೋದನೆಯಲ್ಲಿ ಕನ್ನಡ ಬೋಧನ ವಿಷಯ ಕಡ್ಡಾಯವಾಗಿರುವಂತೆ ಕ್ರಮ ಕೈಗೊಳ್ಳಬೇಕು	ಶಿಕ್ಷಣ ಇಲಾಖೆಗೆ ಮುಂದಿನ ಕ್ರಮಕ್ಕಾಗಿ ಕಳುಹಿಸಲಾಗಿದೆ
7	ಕರ್ನಾಟಕದ ಮಕ್ಕಳಲ್ಲಿ ಕನ್ನಡ ಭಾಷೆ ಹಾಗೂ ಕನ್ನಡದ ಬಗ್ಗೆ ಆಸಕ್ತಿ ಉಂಟಾಗುವಂತೆ ಅವರನ್ನು ಪ್ರಭಾವಿಸಲು ಮಕ್ಕಳ ಸಾಹಿತ್ಯ ಅಕಾಡಮಿಯ ಸ್ಥಾಪನೆಗೊಳ್ಳುವಂತೆ ಸರ್ಕಾರವು ತ್ವರಿತವಾಗಿ ಕ್ರಮ ಕೈಗೊಳ್ಳಬೇಕೆಂದು ಈ ಸಮ್ಮೇಳನವು ಸರಕಾರವನ್ನು ಒತ್ತಾಯಿಸುತ್ತದೆ	ಮಕ್ಕಳ ಸಾಹಿತ್ಯ ಅಕಾಡೆಮಿಯನ್ನು ಪ್ರತ್ಯೇಕವಾಗಿ ರಚನೆ ಮಾಡುವ ಉದ್ದೇಶ ಸರ್ಕಾರಕ್ಕೆ ಇರುವುದಿಲ್ಲ ಈಗಾಗಲೇ ಕನ್ನಡ ಸಾಹಿತ್ಯ ಪರಿಷತ್ತು, ಕನ್ನಡ ಪುಸ್ತಕ ಪ್ರಾಧಿಕಾರ, ಕನ್ನಡ ವಿಶ್ವವಿದ್ಯಾಲಯ ಹಂಪಿ, ಕರ್ನಾಟಕ ಸಾಹಿತ್ಯ ಅಕಾಡಮಿ ಜೊತೆಗೆ ಕನ್ನಡ ಮತ್ತು ಸಂಸ್ಕೃತಿ ನಿರ್ದೇಶನಾಲಯ ಮಕ್ಕಳ

1	2	3
		ಸಾಹಿತ್ಯವನ್ನು ಪ್ರೋತ್ಸಾಹಿಸುವ ಕಾರ್ಯಕ್ರಮವನ್ನು ವಿವಿಧ ರೀತಿಯಲ್ಲಿ ಹಮ್ಮಿಕೊಂಡು ಕಾರ್ಯ ಗತಗೊಳಿಸುತ್ತದೆ

ಚಾಮರಾಜನಗರ ಜಿಲ್ಲಾ ವ್ಯಾಪ್ತಿಯ ಆಸ್ಪತ್ರೆಗಳಲ್ಲಿ ವೈದ್ಯರು ಮತ್ತು ಸಿಬ್ಬಂದಿಗಳ ಕೊರತೆ

148 (52) ಶ್ರೀ ಕೃಷ್ಣಮೂರ್ತಿ ಎ ಆರ್ (ಸಂತೇಮರಳ್ಳಿ) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಚಾಮರಾಜನಗರ ಹಾಗೂ ಸಂತೇಮರಳ್ಳಿ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿರುವ ಗ್ರಾಮವಾರು ಆಸ್ಪತ್ರೆಗಳಾವುವು ಈ ಆಸ್ಪತ್ರೆಗಳಲ್ಲಿ ವೈದ್ಯರು ಹಾಗೂ ಸಿಬ್ಬಂದಿ ಪೂರ್ಣ ಪ್ರಮಾಣದಲ್ಲಿ ನೇಮಕ ಮಾಡಲಾಗಿದೆಯೇ ಇಲ್ಲದಿದ್ದಲ್ಲಿ ಯಾವ ಯಾವ ಆಸ್ಪತ್ರೆಗಳಲ್ಲಿ ವೈದ್ಯರು ಸೇರಿದಂತೆ ಯಾವ ಸಿಬ್ಬಂದಿಯ ಕೊರತೆ ಇದೆ

ಆ) ಸದರಿ ಆಸ್ಪತ್ರೆಗಳಲ್ಲಿ ಕೊರತೆ ಇರುವ ಸಿಬ್ಬಂದಿಗಳನ್ನು ತುಂಬದಿರಲು ಕಾರಣವೇನು ಹಾಗೂ ಈ ಸಿಬ್ಬಂದಿಗಳನ್ನು ಯಾವಾಗ ತುಂಬಲಾಗುವುದು

ಇ) ಮೇಲ್ಕಂಡ ಆಸ್ಪತ್ರೆಗಳು ಸ್ವಂತ ಕಟ್ಟಡದಲ್ಲಿ ನಡೆಯುತ್ತಿದೆಯೇ ಇಲ್ಲದಿದ್ದಲ್ಲಿ ಯಾವ ಯಾವ ಗ್ರಾಮದ ಆಸ್ಪತ್ರೆಗಳಿಗೆ ಕಟ್ಟಡ ಇರುವುದಿಲ್ಲ

ಈ) ಕಟ್ಟಡ ಇಲ್ಲದ ಆಸ್ಪತ್ರೆಗಳಿಗೆ ಕಟ್ಟಡ ಮಂಜೂರಾತಿಗಾಗಿ ಹಣ ಒದಗಿಸಲಾಗಿದೆಯೇ ಇಲ್ಲದಿದ್ದಲ್ಲಿ ಯಾವಾಗ ಸ್ವಂತ ಕಟ್ಟಡ ಹೊಂದಲು ಕ್ರಮ ಕೈಗೊಳ್ಳಲಾಗುವುದು?

ಶ್ರೀ ಕಾಗೋಡು ತಿಮ್ಮಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಚಾಮರಾಜನಗರ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ 11 ಗ್ರಾಮವಾರು ಆಸ್ಪತ್ರೆಗಳು ಇರುತ್ತವೆ ಸಂತೇಮಾರಹಳ್ಳಿ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ 8 ಗ್ರಾಮವಾರು ಆಸ್ಪತ್ರೆಗಳು ಇರುತ್ತವೆ

ಅವುಗಳು ಈ ಕೆಳಕಂ[illegible] ಇರುತ್ತವೆ

ಕ್ರ ಸಂ	ಚಾಮರಾಜನಗ[illegible] ವಿಧಾನ ಸಭಾ ಕ್ಷೇ[illegible] ವ್ಯಾಪ್ತಿಯಲ್ಲಿ	ಸಂತೆಮರಹಳ್ಳಿ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ
1	ವೆಂಕಟಯ್ಯನ ಛತ್ರ	ಆಲೂರು
2	ಬೇಡಗುಳಿ	[illegible]ತೇಮಾರಳ್ಳಿ
3	ಉಡಿಗಾಲ	[illegible]ಲವಾಡಿ
4	ಅರಕಲವಾಡಿ	[illegible]ಂಗನೂರು
5	ಬಿಸಲವಾಡಿ	[illegible]ದಕವಾಡಿ
6	ಅರಳೀಕಟ್ಟೆ	[illegible]ಮ್ಮತ್ತೂರು
7	ಹರವೆ	[illegible]ೇರು